ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು

E-mail:Commissioner.pue@gmail.com. * Ph. No.23361857, 23361858* Fax-23361852

ಸಂಖ್ಯೆ: ಪಪೂಶಿಇ/ಶೈಶಾ-04/ಎಸ್‌ಸಿಪಿ/ಟಿಎಸ್‌ಪಿ/ಲ್ಯಾಟಾ./2018-19 ದಿನಾಂಕ: 16-08-2019

# ಸುತ್ತೋಲೆ

ವಿಷಯ: 2018-19ನೇ ಸಾಲಿನ ಮಾರ್ಚ್ ತಿಂಗಳಲ್ಲಿ ಜರುಗಿದ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವ್ಯಾಸಂಗ ಮಾಡಿದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಬಹುಮಾನವಾಗಿ ಲ್ಯಾಪ್ ಟಾಪ್‌ಗಳನ್ನು ವಿತರಣೆ ಮಾಡುವ ಬಗ್ಗೆ.

ಉಲ್ಲೇಖ:
(1) ಸರ್ಕಾರದ ಆದೇಶ ಸಂಖ್ಯೆ: ಇಡಿ 229 ಯೋಯೋಕ 2017, ಬೆಂಗಳೂರು, ದಿನಾಂಕ: 04-08-2018 (ಸ್ವೀ: 16-08-2018)
(2) ಈ ಕಚೇರಿಯ ಸಮ ಸಂಖ್ಯೆಯ ಪತ್ರ ದಿನಾಂಕ: 26-09-2018
(3) ಸರ್ಕಾರದ ಪತ್ರ ಸಂಖ್ಯೆ: ಇಡಿ 131 ಯೋಸಕ 2018 ದಿನಾಂಕ: 27-10-2018 (ಸ್ವೀ: 03-11-2018)
(4) ಸರ್ಕಾರದ ಪತ್ರ ಸಂಖ್ಯೆ: ಇಡಿ 131 ಯೋಸಕ 2018, ಬೆಂಗಳೂರು ದಿನಾಂಕ: 28-01-2019
(5) ಈ ಕಚೇರಿಯ ಸಮ ಸಂಖ್ಯೆಯ ಜ್ಞಾಪನದ ದಿನಾಂಕ: 04-01-19
(6) ನಿರ್ದೇಶಕರು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ಇವರ ಪತ್ರ ಸಂ:B1/I.L.D.T.27/2018-19.ದಿ:26-06-19(ಸ್ವೀ:03-07-19)
(7) ಈ ಕಚೇರಿಯ ಸಮ ಸಂಖ್ಯೆಯ ಪತ್ರ ದಿನಾಂಕ: 19-07-2019

***

2018-19ನೇ ಶೈಕ್ಷಣಿಕ ವರ್ಷದ ಮಾರ್ಚ್-2019ರಲ್ಲಿ ನಡೆದ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವ್ಯಾಸಂಗ ಮಾಡಿ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಸಂಯೋಜನೆಯಲ್ಲಿ ಅತಿ ಹೆಚ್ಚು ಅಂಕ ಗಳಿಸಿ ಪ್ರಥಮ ಮತ್ತು ದ್ವಿತೀಯ ಸ್ಥಾನ ಪಡೆದ ಪರಿಶಿಷ್ಟ ಜಾತಿಗೆ ಸೇರಿದ 06 ವಿದ್ಯಾರ್ಥಿಗಳು ಹಾಗೂ ಪ್ರಥಮ ಸ್ಥಾನ ಪಡೆದ ಪರಿಶಿಷ್ಟ ಪಂಗಡಕ್ಕೆ ಸೇರಿದ 03 ವಿದ್ಯಾರ್ಥಿಗಳು ಸೇರಿದಂತೆ ಪ್ರತಿ ಜಿಲ್ಲೆಗೆ 09 ವಿದ್ಯಾರ್ಥಿಗಳಂತೆ, 32 ಜಿಲ್ಲೆಗಳ 288 ವಿದ್ಯಾರ್ಥಿಗಳಿಗೆ ಪ್ರೋತ್ಸಾಹಕರ ಬಹುಮಾನವಾಗಿ 2018-19ನೇ ಸಾಲಿನ ಪರಿಶಿಷ್ಟ ಜಾತಿ ಉಪ ಯೋಜನೆ ಹಾಗೂ ಗಿರಿಜನ ಉಪ ಯೋಜನೆ(ಎಸ್.ಸಿ.ಪಿ./ಟಿ.ಎಸ್.ಪಿ.)ಯಡಿ ಒಟ್ಟು 288 ಲ್ಯಾಪ್‌ಟಾಪ್‌ಗಳನ್ನು ಖರೀದಿಸಲು ಉಲ್ಲೇಖ: 4ರ ಸರ್ಕಾರದ ಆದೇಶದಲ್ಲಿ ಅನುಮತಿ ನೀಡಲಾಗಿರುತ್ತದೆ.

ಸರ್ಕಾರದ ಅನುಮತಿಯಂತೆ, ಪದವಿ ಪೂರ್ವ ಶಿಕ್ಷಣ ಇಲಾಖೆಗಾಗಿ ಖರೀದಿಸಲಾಗಿರುವ ಒಟ್ಟು 288 ಲ್ಯಾಪ್‌ಟಾಪ್‌ಗಳನ್ನು ಸರಬರಾಜು ಮಾಡುವ ಸಂಸ್ಥೆಯಿಂದ ನೇರವಾಗಿ ಪದವಿ ಪೂರ್ವ ಶಿಕ್ಷಣ ಇಲಾಖೆಯ 32 ಶೈಕ್ಷಣಿಕ ಜಿಲ್ಲೆಗಳ ಜಿಲ್ಲಾ ಉಪ ನಿರ್ದೇಶಕರುಗಳಿಗೆ ಸರಬರಾಜು ಮಾಡಲು ನಿರ್ದೇಶಕರು,

-2

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು ಇವರಿಗೆ ಉಲ್ಲೇಖ: 7ರ ಪತ್ರದಲ್ಲಿ ಕೋರಲಾಗಿರುತ್ತದೆ. ಹೀಗೆ ತಮ್ಮ ಜಿಲ್ಲೆಗಳಿಗೆ ಸರಬರಾಜಾಗುವ ಲ್ಯಾಪ್‌ಟಾಪ್‌ಗಳನ್ನು ಅರ್ಹ ವಿದ್ಯಾರ್ಥಿಗಳಿಗೆ ಬಹುಮಾನವಾಗಿ ವಿತರಿಸಲು ಈ ಕೆಳಗಿನ ಸೂಚನೆಗಳಂತೆ ಕ್ರಮ ವಹಿಸಲು ತಿಳಿಸಿದೆ.

<u>ಸೂಚನೆಗಳು:</u>

1) ಜಿಲ್ಲೆಗೆ ಅತ್ಯಧಿಕ ಅಂಕ-ಪಡೆದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಮಾತ್ರ ಬಹುಮಾನವನ್ನು ಕಡ್ಡಾಯವಾಗಿ ನೀಡುವುದು.
2) ಜಿಲ್ಲೆಯಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವ್ಯಾಸಂಗ ಮಾಡಿರುವ ಕಲಾ ವಿಭಾಗ, ವಾಣಿಜ್ಯ ವಿಭಾಗ ಹಾಗೂ ವಿಜ್ಞಾನ ವಿಭಾಗಗಳಲ್ಲಿ ಅತಿ ಹೆಚ್ಚು ಅಂಕ ಗಳಿಸಿರುವ ಪರಿಶಿಷ್ಟ ಜಾತಿಯ ಪ್ರತಿ ವಿಭಾಗದಲ್ಲಿ ಪ್ರಥಮ ಹಾಗೂ ದ್ವಿತೀಯ ಸ್ಥಾನ ಪಡೆದ ವಿದ್ಯಾರ್ಥಿ/ವಿದ್ಯಾರ್ಥಿನಿಗೆ ತಲಾ 01 ರಂತೆ (2+2+2=6) ಲ್ಯಾಪ್‌ಟ್ಯಾಪ್‌ಗಳನ್ನು ಬಹುಮಾನವಾಗಿ ವಿತರಿಸುವುದು.
3) ಜಿಲ್ಲೆಯಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವ್ಯಾಸಂಗ ಮಾಡಿರುವ ಕಲಾ ವಿಭಾಗ, ವಾಣಿಜ್ಯ ವಿಭಾಗ ಹಾಗೂ ವಿಜ್ಞಾನ ವಿಭಾಗಗಳಲ್ಲಿ ಅತಿ ಹೆಚ್ಚು ಅಂಕಗಳಿಸಿರುವ ಪರಿಶಿಷ್ಟ ಪಂಗಡದ ಪ್ರತಿ ವಿಭಾಗದ ಒಬ್ಬ (ಪ್ರಥಮ ಸ್ಥಾನ ಪಡೆದ) ವಿದ್ಯಾರ್ಥಿ/ವಿದ್ಯಾರ್ಥಿನಿಗೆ 01 (1+1+1=3) ಲ್ಯಾಪ್‌ಟ್ಯಾಪ್‌ನ್ನು ಬಹುಮಾನವಾಗಿ ವಿತರಿಸುವುದು.
4) ಬಹುಮಾನವಾಗಿ ವಿದ್ಯಾರ್ಥಿಗಳಿಗೆ ಲ್ಯಾಪ್‌ಟ್ಯಾಪ್‌ಗಳನ್ನು ವಿತರಿಸಿದ ಕುರಿತು ಸದರಿ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಂದ ಹಾಗೂ ಅವರ ಪೋಷಕರಿಂದ ಸ್ವೀಕೃತಿ ಪತ್ರವನ್ನು ಪಡೆಯುವುದು ಕಡ್ಡಾಯವಾಗಿರುತ್ತದೆ.
5) ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ವಿತರಣೆ ಸಮಾರಂಭದ ಛಾಯಾಚಿತ್ರಗಳು, ಸಂಕ್ಷಿಪ್ತ ವರದಿ ಹಾಗೂ ಸ್ವೀಕೃತಿಯನ್ನು (Soft Copy & Hard Copy) ಈ ಕಚೇರಿಗೆ ಮರು ಟಪಾಲಿನಲ್ಲಿ ಕಳುಹಿಸುವುದು. SoftCopyಯನ್ನು ಕಡ್ಡಾಯವಾಗಿ laptoppuacademic@gmail.com ಗೆ ಕಳುಹಿಸುವುದು. Hard Copyಯನ್ನು ಜಂಟಿ ನಿರ್ದೇಶಕರು(ಶೈಕ್ಷಣಿಕ), ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560 012 ಇವರಿಗೆ ಕಳುಹಿಸುವುದು.
6) ಬಹುಮಾನ ನೀಡುವುದರಲ್ಲಿ ಯಾವುದಾದರೂ ದೂರು ಬಂದಲ್ಲಿ ಸಂಬಂಧಿಸಿದ ಜಿಲ್ಲೆಯ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರೇ ಸಂಪೂರ್ಣ ಜವಾಬ್ದಾರರಾಗಿರುತ್ತಾರೆ.
7) ಸಂಬಂಧಿಸಿದ ಪ್ರಾಧಿಕಾರದಿಂದ ಕೈಗೊಳ್ಳುವ ತಪಾಸಣೆಯ ಸಂದರ್ಭದಲ್ಲಿ ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರು/ಕಾಲೇಜಿನ ಪ್ರಾಂಶುಪಾಲರು ಮಾಹಿತಿಗಳನ್ನು ಒದಗಿಸುವುದು.

ಯಾವುದೇ ಕಾರಣಕ್ಕೂ ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರು ನೇರವಾಗಿ ಕೇಂದ್ರ ಕಚೇರಿಗೆ ಸಾಫ್ಟ್ ಕಾಪಿಯನ್ನಾಗಲೀ ಅಥವಾ ಹಾರ್ಡ್ ಕಾಪಿಯನ್ನಾಗಲೀ ಕಳುಹಿಸಬಾರದು. ಜಿಲ್ಲಾ ಉಪನಿರ್ದೇಶಕರು ತಮ್ಮ ಜಿಲ್ಲಾ ವ್ಯಾಪ್ತಿಯ ಸಂಬಂಧಿಸಿದ ಕಾಲೇಜುಗಳಿಂದ ಸಂಗ್ರಹಿಸಿದ ಮಾಹಿತಿಗಳನ್ನು ಕ್ರೋಢೀಕರಿಸಿ ಕೇಂದ್ರ ಕಚೇರಿಗೆ ಕಡ್ಡಾಯವಾಗಿ ಸಲ್ಲಿಸುವುದು.

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ

<u>ಪ್ರತಿಗಳನ್ನು:</u>

1. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ), ಬಹುಮಹಡಿ ಕಟ್ಟಡ, ಬೆಂಗಳೂರು-560 001-ಇವರಿಗೆ ಮಾಹಿತಿಗಾಗಿ
2. ನಿರ್ದೇಶಕರು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560 003-ಇವರಿಗೆ ಮಾಹಿತಿಗಾಗಿ
3. ರಾಜ್ಯದ ಎಲ್ಲಾ 32 ಜಿಲ್ಲೆಗಳ ಪದವಿ ಪೂರ್ವ ಶಿಕ್ಷಣ ಇಲಾಖೆಯ ಜಿಲ್ಲಾ ಉಪನಿರ್ದೇಶಕರುಗಳಿಗೆ – ಮುಂದಿನ ಸೂಕ್ತ ಕ್ರಮಕ್ಕಾಗಿ
4. ಸಹಾಯಕ ನಿರ್ದೇಶಕರು/ಲೆಕ್ಕಾಧಿಕಾರಿಗಳು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು-ಇವರಿಗೆ ಮಾಹಿತಿಗಾಗಿ.
5. ಮಾನ್ಯ ನಿರ್ದೇಶಕರ ಆಪ್ತ ಶಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು-ಇವರಿಗೆ ಮಾಹಿತಿಗಾಗಿ
6. ಸಹಾಯಕ ನಿರ್ದೇಶಕರು, ಇ-ಆಡಳಿತ, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ – 32 ಜಿಲ್ಲೆಗಳ ಉಪನಿರ್ದೇಶಕರುಗಳಿಗೆ ಮಾಹಿತಿಯನ್ನು ಇ-ಮೇಲ್ ಮೂಲಕ ರವಾನಿಸಲು
7. ಕಚೇರಿ ಪ್ರತಿ.